ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ, ಕೆ.ಹೆಚ್.ರಸ್ತೆ, ಶಾಂತಿ ನಗರ, ಬೆಂಗಳೂರು-560 027.
ಸಂಚಾರ (ವಾಣಿಜ್ಯ) ಶಾಖೆ.

**ಸಂ:ಕರಾಸಾ:ಕೇಕ:ಸಂ:ಸಿ2:1646(2)1074: 5484 :2016-17;** **ದಿನಾಂಕ: 27 .12.2016**

ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು,
ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ.

**ವಿಷಯ:** ವಿಕಲಚೇತನರ ರಿಯಾಯಿತಿ ದರದ ಬಸ್‌ಪಾಸ್‌ಗಳ ನವೀಕರಣ ಕುರಿತು.
**ಉಲ್ಲೇಖ:** ಸಾಮಾನ್ಯ ಸ್ಥಾಯಿ ಆದೇಶ ಸಂಖ್ಯೆ: 779/2016 ದಿನಾಂಕ: 20.12.2016

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಪಟ್ಟಂತೆ ತಿಳಿಯಪಡಿಸುವುದೇನೆಂದರೆ, ಉಲ್ಲೇಖಿತ ಸಾಮಾನ್ಯ ಸ್ಥಾಯಿ ಆದೇಶ ಸಂಖ್ಯೆ: 779/2016 ರನ್ವಯ ವಿಕಲಚೇತನರಿಗೆ ರಿಯಾಯಿತಿ ಪಾಸುಗಳನ್ನು ವಿತರಿಸುವಾಗ ಅನುಸರಿಸಬೇಕಾದ ಕ್ರಮಗಳು ಹಾಗೂ ಇತರೆ ವಿಷಯಗಳ ಬಗ್ಗೆ ಹಲವಾರು ಸಾಮಾನ್ಯ ಸ್ಥಾಯಿ ಆದೇಶ / ಸುತ್ತೋಲೆಗಳಿದ್ದು, ಅವುಗಳನ್ನು ಹಿಂಪಡೆದು ಹಾಲಿ ಚಾಲ್ತಿಯಲ್ಲಿರುವ ನಿರ್ದೇಶನಗಳನ್ನು ಕ್ರೋಢಿಕರಿಸಿ ಆದೇಶ ಹೊರಡಿಸಲಾಗಿರುತ್ತದೆ.

ಮುಂದುವರೆದು, 2017ನೇ ಸಾಲಿಗಾಗಿ 01.01.2017 ರಿಂದ 31.12.2017ರವರೆಗೆ (**ಜನವರಿ-2017 ರಿಂದ ಡಿಸೆಂಬರ್-2017**) ಮಾನ್ಯತೆ ಇರುವಂತೆ ವಿಕಲಚೇತನರ ರಿಯಾಯಿತಿ ಬಸ್‌ಪಾಸ್‌ಗಳಿಗೆ ಸಂಬಂಧಿಸಿದಂತೆ ಹೊಸ ಪಾಸ್‌ಗಳನ್ನು ವಿತರಿಸುವ ಹಾಗೂ ಹಳೆಯ ಪಾಸ್‌ಗಳ ನವೀಕರಣಕ್ಕೆ ದಿನಾಂಕ 01.01.2017ರಿಂದಲೇ ಸೂಕ್ತ ಕ್ರಮ ಕೈಗೊಳ್ಳುವುದು.

2017ನೇ ಸಾಲಿಗೆ ವಿಕಲಚೇತನರ ರಿಯಾಯಿತಿ ಬಸ್‌ಪಾಸ್‌ಗಳನ್ನು ನವೀಕರಿಸಬೇಕಾಗಿದ್ದು, ವಿಕಲಚೇತನ ಫಲಾನುಭವಿಗಳಿಗೆ ನವೀಕರಿಸಿಕೊಳ್ಳಲು ಆಗಬಹುದಾದ ತೊಂದರೆಯನ್ನು ಗಮನದಲ್ಲಿಟ್ಟುಕೊಂಡು ಹಾಲಿ 2016ನೇ ಸಾಲಿನಲ್ಲಿ ವಿತರಿಸಿರುವ ವಿಕಲಚೇತನರ ಬಸ್‌ಪಾಸ್‌ಗಳನ್ನು **ದಿನಾಂಕ: 28.02.2017 ರವರೆಗೆ ಅನುಮತಿಸುವುದು.** ಈ ಸಂಬಂಧ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಹಾಗೂ ಬಸ್ ನಿಲ್ದಾಣದ ಮೇಲ್ವಿಚಾರಣಾ ಸಿಬ್ಬಂದಿಗಳಿಗೆ ಸೂಕ್ತ ಮಾಹಿತಿ ನೀಡುವುದು. ಈ ಸೂಚನೆಗಳನ್ನು ಘಟಕದ ಸೂಚನಾ ಫಲಕಗಳಲ್ಲಿ ಸಹ ಪ್ರದರ್ಶಿಸುವುದು. ಈ ಸಂಬಂಧ ಬಸ್ ನಿಲ್ದಾಣದ ಹಾಗೂ ಘಟಕದ ಅಯಕಟ್ಟಿನ ಸ್ಥಳದಲ್ಲಿ ಬ್ಯಾನರ್‌ಗಳನ್ನು ಪ್ರದರ್ಶಿಸುವ ವ್ಯವಸ್ಥೆ ಮಾಡುವುದು. ಸದರಿ ಪಾಸುಗಳನ್ನು ಮಾನ್ಯ ಮಾಡದಿರುವ ಬಗ್ಗೆ ಫಲಾನುಭವಿಗಳಿಂದ ದೂರು ಬರದಂತೆ ಎಚ್ಚರವಹಿಸುವುದು. ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಕೋರಿದೆ.

ಸಹಿ/-
ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)

**ಪ್ರತಿಯನ್ನು ವಂದನಾಪೂರ್ವಕವಾಗಿ:**

✓ಸರ್ಕಾರದ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001 ರವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.

✓ನಿರ್ದೇಶಕರು, ವಿಕಲಚೇತನ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560 001 ರವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.

✓ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಾರಿಗೆ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001ರವರ ಮಾಹಿತಿಗಾಗಿ ಕಳುಹಿಸಲಾಗಿದೆ.

✓ಸಾರ್ವಜನಿಕ ಸಂಪರ್ಕಾಧಿಕಾರಿ, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು-27 ರವರಿಗೆ ಮಾಹಿತಿಗಾಗಿ ಹಾಗೂ ಸದರಿ ವಿಷಯವನ್ನು ದಿನಪತ್ರಿಕೆಗಳಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲು ಕೋರಲಾಗಿದೆ.

✓ಮುಖ್ಯ ಸಂಚಾರ ವ್ಯವಸ್ಥಾಪಕರು, ಬೆಂ.ಮ.ಸಾ.ಸಂಸ್ಥೆ, ವಾ.ಕ.ರ.ಸಾ.ಸಂಸ್ಥೆ, ಈ.ಕ.ರ.ಸಾ.ಸಂಸ್ಥೆ, ಕೇಂದ್ರ ಕಛೇರಿ, ಬೆಂಗಳೂರು, ಹುಬ್ಬಳ್ಳಿ ಮತ್ತು ಗುಲ್ಬರ್ಗಾ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)

ಸಂಖ್ಯೆ 5270
ದಿನಾಂಕ: 30/12/16

*E:\DC'S LTRS*